ದಿಃ 11.11.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಹೆಚ್.ಬಿ.ಎಸ್., ವಕೀಲರಿಂದ ವಾದಿ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ವಾದಿಯು ನನಗೆ ನೀಡಿರುವ ಅಧಿಕಾರ ಪತ್ರವನ್ನು ಹಾಜರು ಮಾಡಿದ್ದು ನಿ.ಪಿ.1 ಎಂದು ಗುರುತಿಸಲಾಯಿತು, ವಂಶ ವೃಕ್ಷವನ್ನು ಹಾಜರು ಮಾಡಿದ್ದು ನಿ.ಪಿ.2 ಎಂದು ಗುರುತಿಸಲಾಯಿತು, ಮುಟೇಷನ್ ರಿಜಿಸ್ಟರ್ ಅನ್ನು ಹಾಜರು ಮಾಡಿದ್ದು ನಿ.ಪಿ.3 ಎಂದು ಗುರುತಿಸಲಾಯಿತು, ಸಂಸೆ ಗ್ರಾಮದ ಸರ್ವೆ ನಂಬರ್ 307 ಮತ್ತು ಸರ್ವೆ ನಂಬರ್ 400 ರ ಪಹಣಿ ಪತ್ರವನ್ನು ಹಾಜರು ಮಾಡಿದ್ದು ನಿ.ಪಿ.4 ಮತ್ತು 5 ಎಂದು ಗುರುತಿಸಲಾಯಿತು.
3. ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲು ಶ್ರೀ ಎನ್.ಎಸ್.ಜೆ., ವಕೀಲರಿಂದ ಪ್ರತಿವಾದಿ ಪರವಾಗಿ

4. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿರುತ್ತಾರೆ. ನೀಡಲಾಗಿದೆ.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ದಿಃ 29.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಪಾಟೀ ಸವಾಲು ಶ್ರೀ ಎನ್.ಎಸ್.ಜೆ., ವಕೀಲರಿಂದ ಪ್ರತಿವಾದಿ ಪರವಾಗಿ

5. ನನ್ನ ತಾಯಿಯ ತಂದೆಗೆ 3 ಜನ ಮಕ್ಕಳು ಎಂದರೆ ಸರಿ. ವಾದಿ ನನ್ನ ತಾಯಿ. ಪ್ರತಿವಾದಿ ನನ್ನ ಚಿಕ್ಕಮ್ಮ. ಸಂತೋಷ್ ಕುಮಾರ್ ನನ್ನ ಮಾವ. ಪ್ರತಿವಾದಿಗೆ 3 ಜನ ಹೆಣ್ಣು ಮಕ್ಕಳು, ಅವರುಗಳು ದೀಪ್ತಿ, ದಿಶಾ ಮತ್ತು ದಿವ್ಯ. ಸಂತೋಷ್ ಕುಮಾರ್ ರವರು ಮದುವೆಯಾಗಿರಲಿಲ್ಲ. ಪ್ರತಿವಾದಿಯ ಮಗಳನ್ನು ಸಂತೋಷ್ ಕುಮಾರ್ ಮದುವೆಯಾಗಿದ್ದರು ಎಂದರೆ ಸುಳ್ಳು. ಸಂತೋಷ್ ಕುಮಾರ್ ಮದುವೆಯಾಗಿರಲಿಲ್ಲ ಎಂದು ಸುಳ್ಳು ಹೇಳಿ ದಾವೆಯನ್ನು ಹೂಡಿದ್ದೇವೆ ಎಂದರೆ ಸರಿಯಲ್ಲ. ಸಂತೋಷ್ ಕುಮಾರ್ ರವರ ಪತ್ನಿಯನ್ನು ಈ ಕೇಸಿನಲ್ಲಿ ಸೇರಿಸದ ಕಾರಣ ದಾವೆ ಊರ್ಜಿತವಲ್ಲ ಎಂದರೆ ಸರಿಯಲ್ಲ. ಸಂತೋಷ್ ಕುಮಾರ್ ರವರ ಹೆಂಡತಿಯನ್ನು ಪಕ್ಷಗಾರರನ್ನಾಗಿ ಮಾಡಿದರೆ ಆಕೆಗೆ ಹಿಸ್ಸೆ ನೀಡಬೇಕಾಗುತ್ತದೆ ಎಂಬ ಕಾರಣದಿಂದ ಆಕೆಯನ್ನು ಪಕ್ಷಗಾರಳನ್ನಾಗಿ ಮಾಡಿಲ್ಲ ಎಂದರೆ ಸುಳ್ಳು.

6. ಪ್ರತಿವಾದಿ ತುಮಕೂರಿನ ಮಾಯಸಂದ್ರದಲ್ಲಿ ವಾಸವಾಗಿದ್ದಾರೆ ಎಂದರೆ ಸರಿ. ಸಂತೋಷ್ ಕುಮಾರ್ ತೀರಿಕೊಂಡ ಬಳಿಕ ಪ್ರತಿವಾದಿಗೆ ಮಾಹಿತಿಯನ್ನು ನೀಡದೇ ದಾವ ಆಸ್ತಿಯ ಖಾತೆಗಳನ್ನು ನಾನು, ನನ್ನ ತಾಯಿ ವಾದಿಗೆ ಹೆಸರಿಗೆ ಖಾತೆ ಮಾಡಿಸಲು ಪ್ರಯತ್ನಿಸಿದ್ದೇನೆ ಎಂದರೆ ಸುಳ್ಳು. ಉದ್ದೇಶಪೂರ್ವಕವಾಗಿ ಸಂತೋಷ್ ಕುಮಾರ್ ರವರ ಹೆಂಡತಿಯನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸುಳ್ಳು. ನಾನು ನನ್ನ ತಾಯಿಯ ಹೆಸರಿಗೆ ಖಾತೆಯನ್ನು ಮಾಡಲು ಪ್ರಯತ್ನಿಸಿದಾಗ ಪ್ರತಿವಾದಿ ಪ್ರತಿರೋದ ತೋರಿಸಿದ ಕಾರಣ ಈ ದಾವೆಯನ್ನು ತಂದಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಜ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ